OS No. 64/2021

PW-1

**(ಇಂದು ದಿಃ 16-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**ಮುಂದುವರೆದ ಪಾಟೀ ಸವಾಲುಃ- 1 ಮತ್ತು 2 ನೇ ಪ್ರತಿವಾದಿಯರ ಪರ ಶ್ರೀ.HSR ವಕೀಲರಿಂದಃ-**

ದಾವೆಯಲ್ಲಿ ನನ್ನ ಅಜ್ಜಿ ಮತ್ತು ಚಿಕ್ಕಪ್ಪ ರವರ ಹೆಸರಿನಲ್ಲಿರುವ ಆಸ್ತಿಗಳನ್ನು ಮಾತ್ರ ಸೇರಿಸಿ ಅವುಗಳಿಗೆ ಸಂಬಂದಪಟ್ಟ ದಾಖಲಾತಿಗಳನ್ನು ಮಾತ್ರ ಹಾಜರುಪಡಿಸಿದ್ದು ನನ್ನ ತಂದೆ ಹೆಸರಿಲ್ಲಿರುವ ಆಸ್ತಿಗಳನ್ನು ಈ ದಾವೆಯಲ್ಲಿ ಸೇರಿಸಿಲ್ಲ ಮತ್ತು ಅವುಗಳಿಗೆ ಸಂಬಂದಪಟ್ಟ ದಾಖಲಾತಿಗಳನು್ನ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆ ಹೆಸರಿನಲ್ಲಿದ್ದ ಆಸ್ತಿತಿಗಳನ್ನು ನಾವು ಮಾರಾಟ ಮಾಡಿದ್ದೇವೆ ಎಂದರೆ ಸರಿಯಲ್ಲ. ಆ ರೀತಿ ಮಾರಾಟ ಮಾ ಡಿದ ಕಾರಣಕ್ಕೆ ಈ ದಾಖಲಾತಿಗಳನ್ನು ಹಾಜರುಪಡಿಸಿದ್ದೇನೆ ಎಂ ದರೆ ಸರಿಯಲ್ಲ. ನನ್ನ ಅಜ್ಜ ತೀರಿ ಹೋದ ನಂತರ ನನ್ನ ತಂದೆ ಕುಟುಂಬದ ಯಜಮಾನಿಕೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನನ್ನ ಅಜ್ಜ ತೀರಿ ಹೋದಾಗ ನನಗೆ ಎಷ್ಟು ವಯಸ್ಸು ಆಗಿತ್ತು ನನಗೆ ಗೊತ್ತಿಲ್ಲ. ನನ್ನ ಅಜ್ಜ ಸುಮಾರು 2000 ರಲ್ಲಿ ತೀರಿ ಹೋಗಿದ್ದಾರೆ . ನನ್ನ ಅಜ್ಜ ತೀರಿ ಹೋದಾಗ ನಾನು ಚಿಕ್ಕವನಿದ್ದೆ ಕಾರಣ ನನ್ನ ಅಜ್ಜ ತೀರಿ ಹೋದ ನಂತರ ನನ್ನ ತಂದೆ ಯಜಮಾನಿಕೆ ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆ ನನ್ನ ಅಜ್ಜಿನಿಗೆ ಹಿರಿಯ ಮಗ ಎಂದರೆ ಸರಿ. ನಾನು ಸುಳ್ಳು ದಾಖಲಾತಿಗಳನ್ನು ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಸೇಡಂ.**